<u>ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಅಫಜಲಪೂರ</u>

<u>ಸಿಸಿ ನಂ. **219/2019**</u>

ಚಾಸಾ- 2 ಫ್ರಾಸಾ-1

ಸತ್ಯ ಪ್ರತಿಜ್ಞೆಯ ಮೇರೆಗೆ ಪ್ರಮಾಣಿಕೃತ ಹೇಳಿಕೆ
ಪಡೆದುಕೊಳ್ಳಲಾಯಿತು.
ದಿನಾಂಕ: 09-01-2026

| | | |
|---|---|---|
| ಹೆಸರು | : | ಶಿವಪ್ಪ |
| ತಂದೆಯ ಹೆಸರು | : | ಗಿರಿಮಲ್ಲಪ್ಪ |
| ವಯಸ್ಸು | : | 37 ವರ್ಷ |
| ಉದ್ಯೋಗ | : | ಕೂಲಿಕೆಲಸ |
| ವಾಸಸ್ಥಳ | : | ಅಫಜಲಪುಾರ |

-: <u>ಮುಖ್ಯ ವಿಚಾರಣೆ **:-** ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ **:-**</u>

ಚಾಸಾ 3 ಪರಿಚಯ ಇರುವುದಿಲ್ಲ.

ಸಾಕ್ಷಿಗೆ ಜಪ್ತಿ ಪಂಚನಾಮೆಯನ್ನು ತೋರಿಸಿದ್ದು ಸಾಕ್ಷಿ ಅದರಲ್ಲಿ ತನ್ನ ಸಹಿ ನೋಡಿ ಗುರುತಿಸಿದ್ದು ಜಪ್ತಿ ಪಂಚನಾಮೆಯನ್ನು ಈಗ ನಿಪಿ-**1** ಎಂದು ಮತ್ತು ಸಾಕ್ಷಿಯ ಸಹಿಯನ್ನು ನಿಪಿ-**1**(ಎ) ಎಂದು ಗುರುತಿಸಲಾಯಿತು.

ನಾನು ಒಂದು ದಿನ ಪೋಲಿಸ ಠಾಣೆ ಕಡೆ ಹೋದಾಗ ಪೋಲಿಸರು ಸಹಿ ಮಾಡು ಎಂದು ಹೇಳಿದ್ದಕ್ಕೆ ಸಹಿ ಮಾಡಿರುತ್ತೇನೆ. ನನಗೆ ಈ ಪ್ರಕರಣದ ಕುರಿತು ಯಾವುದೇ ಮಾಹಿತಿ ಇಲ್ಲ.

(ಈ ಹಂತದಲ್ಲಿ ಸ.ಸ.ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲಿಗೆ ಅನುಮತಿ ಕೋರಿರುತ್ತಾರೆ, ಅನುಮತಿ ನೀಡಲಾಯಿತು)

<u>ಪಾಟೀ ಸವಾಲುಃ ಸ.ಸ.ಅ. ರವರಿಂದ</u>

ದಿಃ 23-10-2017 ರಂದು ಬೆಳಿಗ್ಗೆ 9-30 ಕ್ಕೆ ನನಗೆ ಮತ್ತು ಚಾಸಾ 3 ರವರಿಗೆ ಪೋಲಿಸರು ಠಾಣೆಗೆ ಕರೆಸಿ ತಮಗೆ ಬಂದ ಮಾಹಿತಿ ತಿಳಿಸಿ ಪಂಚರಾಗಲು ಕೇಳಿಕೊಂಡು ಅದಕ್ಕೆ ನಾವು ಒಪ್ಪಿಕೊಂಡು ಮಾಡಬಾಳ ತಾಂಡಾಕ್ಕೆ ಹೋಗಿರುತ್ತೇವೆ ಎಂದರೆ ಸರಿಯಲ್ಲ. ಆಗ ಒಂದು ಟಿಪ್ಪರನಲ್ಲಿ ಮರಳು ತುಂಬಿಕೊಂಡು ದುದನಿ ಕಡೆಗೆ ಹೋಗುತ್ತಿದ್ದ ಟಿಪ್ಪರನ್ನ ಚಾಲಕನು ಪೋಲಿಸರ ಜೀಪ ನೋಡಿ ಟಿಪ್ಪರನ್ನು ಸ್ಥಳದಲ್ಲಿ ನಿಲ್ಲಿಸಿ ಓಡಿಹೋಗಿರುತಾನೆ ಎಂದರೆ ನನಗೆ ಗೊತ್ತಿಲ್ಲ. ನಂತರ ಸದರಿ ಟಿಪ್ಪರ ಮತ್ತು ಮರಳನ್ನು ನನ್ನ ಹಾಗೂ ಚಾಸಾ 3 ರವರ ಸಮಕ್ಷಮ ಪೋಲಿಸರು ಜಪ್ತಿ ಪಂಚನಾಮೆ ಮಾಡಿ ನಮ್ಮ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ ಆರೋಪಿ ಪರ ಶ್ರೀ **SSP** ವಕೀಲರಿಂದಃ-</u>

ಆರೋಪಿ ಪರ  ವಕೀಲರು ಪಾಟೀ ಸವಾಲು ಇಲ್ಲಾ ಎಂದು ನುಡಿದಿರುತ್ತಾರೆ.

<u>ಮರು ವಿಚಾರಣೆಃ - ಇಲ್ಲ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ

ಸಿವಿಲ್ & ಪ್ರ.ದ.ನ್ಯಾ. ದಂಡಾಧಿಕಾರಿಗಳು
ಅಫಜಲಪೂರ